# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** **ಸರ್ಕಾರಿ ನೌಕರರಾದ (1) ಶ್ರೀ ಹೆಚ್.ಬಿ.ಲಿಂಗಯ್ಯ, ಅಂದಿನ ಕಾರ್ಯದರ್ಶಿ, ಸಿ.ಎಸ್.ಪುರ ಗ್ರಾಮ ಪಂಚಾಯತಿ, ಪ್ರಸ್ತುತ ಕೊಪ್ಪ ಗ್ರಾಮ ಪಂಚಾಯತಿ, ಕುಣಿಗಲ್ ತಾಲ್ಲೂಕು, ತುಮಕೂರು ಜಿಲ್ಲೆ ಇವರ ಕರ್ತವ್ಯ ಲೋಪ/ದುರ್ವತನೆ ಎಸಗಿರುವ ಬಗ್ಗೆ-ಆದೇಶ.**

**ಓದಲಾಗಿದೆ:** 1. ಮಾನ್ಯ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ ಅ.ಸ.ಪ.ಸಂ:ಕಂಪ್ಲೇಂಟ್/ಉಪಲೋಕ್/ಬಿಡಿ-1873/2016/ಎಆರ್‌ಎಲ್‌ಓ-2, ದಿನಾಂಕ: 02-05-2017.

2. ಮಾನ್ಯ ಉಪಲೋಕಾಯಕ್ತರವರ ವರದಿ ಸಂಖ್ಯೆ:ಕಂಪ್ಲೇಂಟ್/ಉಪಲೋಕ್/ ಬಿಡಿ-1873/2016/ಸನಿಕಾಸ-2, ದಿನಾಂಕ: 04-04-2017.

**ಪ್ರಸ್ತಾವನೆ:**

ಮೇಲೆ ಓದಲಾದ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ದಿನಾಂಕ: 02-05-2017 ರವರ ಪತ್ರದೊಂದಿಗೆ ಕರ್ನಾಟಕ ಲೋಕಾಯುಕ್ತ ಕಾಯ್ದೆ 1984 ಕಲಂ 7(2) ರನ್ವಯ ಮಾನ್ಯ ಉಪಲೋಕಾಯುಕ್ತರವರ ಸಲ್ಲಿಸಿರುವ ವರದಿಯಲ್ಲಿ ಶ್ರೀ ಹೆಚ್.ಬಿ.ಲಿಂಗಯ್ಯ, ಕಾರ್ಯದರ್ಶಿ, ಸಿ.ಎಸ್.ಪುರ ಗ್ರಾಮ ಪಂಚಾಯತಿ, ಗುಬ್ಬಿ ತಾಲ್ಲೂಕು, ಹಾಲಿ ಕುಣಿಗಲ್ ತಾಲ್ಲೂಕು, ತುಮಕೂರು ಜಿಲ್ಲೆ (ಇನ್ನು ಮುಂದೆ "ಎದುರುದಾರರು" ಎಂದು ಕರೆಯಲ್ಪಡುತ್ತಾರೆ) ಇವರು ಸಾರ್ವಜನಿಕ ನೌಕರರಾಗಿದ್ದು, ದೂರುದಾರರಾದ ಶ್ರೀ ವಿರುಪಾಕ್ಷಗೌಡ @ ಕೃಷ್ಣಗೌಡ ಬಿನ್ ಲೇಟ್ ಉಗ್ರೇಗೌಡ, 3ನೇ ಎ ಮುಖ್ಯ ರಸ್ತೆ, 1ನೇ ಹಂತ, 1ನೇ ಘಟ್ಟ, ಮಂಜುನಾಥನಗರ, ಬೆಂಗಳೂರು (ಇನ್ನು ಮುಂದೆ "ದೂರುದಾರರು" ಎಂದು ಕರೆಯಲ್ಪಡುತ್ತಾರೆ) ಇವರು ಭೇಟಿ ಮಾಡಿದಾಗ ದುರ್ನಡತೆ ತೋರಿ ಕರ್ತವ್ಯ ಲೋಪ ಎಸಗಿರುವುದು ಮೇಲ್ನೋಟಕ್ಕೆ ಕಂಡು ಬಂದಿದ್ದರಿಂದ, ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 7(2) ರನ್ವಯ ಸ್ವಯಂ ಪ್ರೇರಿತ ದೂರು ದಾಖಲಿಸಿಕೊಂಡು ತನಿಖೆ ತೆಗೆದುಕೊಂಡಾಗ, ಈ ಕೆಳಗೆ ಹೇಳಿದ ಸಂಗತಿಗಳು ಮೇಲ್ನೋಟಕ್ಕೆ ಕಂಡು ಬರುತ್ತದೆ.

**ದೂರಿನ ಸಂಕ್ಷಿಪ್ತ ವಿವರಣೆ:**

ದೂರುದಾರರು ತಮ್ಮ ದೂರಿನಲ್ಲಿ ಸಿ.ಎಸ್.ಪುರ ಗ್ರಾಮ ಪಂಚಾಯ್ತಿ ಆಸ್ತಿ ಸಂಖ್ಯೆ:681/848/864ರ ಡಿಮ್ಯಾಂಡ್ ರಿಜಿಸ್ಟರ್‌ನಲ್ಲಿ 2008-2009ನೇ ಸಾಲಿನಲ್ಲಿ ಶ್ರೀ ಕೆ.ಸರಸಿಂಹಮೂರ್ತಿ. ಶ್ರೀ ವಿರೂಪಾಕ್ಷೇಗೌಡ, ಶ್ರೀ ಭೋಜರಾಜ, ಶ್ರೀ ಕಾಂತರಾಜ ರವರುಗಳ ಹೆಸರಿಗೆ ಜಂಟಿ ಇದ್ದ ಡಿಮ್ಯಾಂಡ್ ರಿಜಿಸ್ಟರ್‌ನ್ನು ಕ್ಷತಿಯನ್ನುಂಟು ಮಾಡುವ ಉದ್ದೇಶದಿಂದ ಹಾಗೂ ಶ್ರೀ ವಿರೂಪಾಕ್ಷೇಗೌಡ ರವರಿಗೆ ಮೋಸಮಾಡುವ ಉದ್ದೇಶದಿಂದ, ದಾಖಲೆಯನ್ನು ಸೃಷ್ಟಿಸಿ, 2010-11ನೇ ಸಾಲಿಗೆ ಶ್ರೀ ಕೆ.ಸರಸಿಂಹಮೂರ್ತಿ, ಶ್ರೀ ಭೋಜರಾಜ, ಶ್ರೀ ಕಾಂತರಾಜ ರವರುಗಳ ಜೊತೆ ಸೇರಿಕೊಂಡು ಅಪರಾಧಿಕ ಒಳಸಂಚನ್ನು ರೂಪಿಸಿ ತಿಳಿದು ಸಹ ಶ್ರೀ ವಿರೂಪಾಕ್ಷಗೌಡ ರವರ ಹೆಸರನ್ನು ಕೈಬಿಟ್ಟು, ಡಿಮ್ಯಾಂಡ್ ರಿಜಿಸ್ಟರ್ ನೀಡಿದ್ದು, ಇದರಿಂದ ಶ್ರೀ ಕೆ.ನರಸಿಂಹಮೂರ್ತಿ, ಶ್ರೀ ಭೋಜರಾಜ, ಶ್ರೀ ಕಾಂತರಾಜರವರುಗಳು ಸೇರಿಕೊಂಡು ಮೇಲ್ಕಂಡ ಸ್ವತ್ತನ್ನು ಶ್ರೀವಿರೂಪಾಕ್ಷಗೌಡ ರವರ ಹೆಸರನ್ನು ಕೈಬಿಟ್ಟು ಶ್ರೀ ಭೋಜರಾಜ ರವರ ಹೆಸರಿಗೆ ಜಿ.ಪಿ.ಎ ಪತ್ರ ಮಾಡಿಕೊಂಡು, ಜಿ.ಪಿ.ಎ ಪತ್ರ ಹಾಗೂ 2010-11ನೇ ಸಾಲಿನ ಡಿಮ್ಯಾಂಡ್ ರಿಜಿಸ್ಟರ್ ಸಹಾಯದಿಂದ ಗುಬ್ಬಿ ಉಪನೋಂದಾಣಾಧಿಕಾರಿಗಳ ಕಛೇರಿಯಲ್ಲಿ ಶ್ರೀ ಭೋಜರಾಜು ಎಂಬುವರು ಸದರಿ ಡಿಮ್ಯಾಂಡ್ ರಿಜಿಸ್ಟರ್ ನೈಜವೆಂದುಉಪಯೋಗಿಸಿ ಶ್ರೀ ತಿರುಮಲೇಗೌಡ ರವರ ಹೆಸರಿಗೆ ಎದುರುದಾರರು ನೋಂದಣಿ ಮಾಡಿಕೊಟ್ಟಿದ್ದಾರೆಂದು ಆಪಾದಿಸಿರುತ್ತಾರೆ.

ಈ ಬಗ್ಗೆ ದೂರರದಾರರು ನ್ಯಾಯಾಲಯದಲ್ಲಿ ದಂಡ ಪ್ರಕ್ರಿಯಾ ಸಂಹಿತೆ ಕಲಂ 200 ಅಡಿಯಲ್ಲಿ ಖಾಸಗಿ ದೂರು ಸಲ್ಲಿಸಿದ್ದು ಅಲ್ಲಿ ತನಿಖೆಗಾಗಿ ಪೋಲಿಸರಿಗೆ ಆದೇಶಿಸಲಾಗಿರುತ್ತದೆ.

ಪೋಲಿಸರು ಸದರಿ ಖಾಸಗಿ ದೂರಿನ ಅನುಸಾರ ಪ್ರಕರಣವನ್ನು ಮೊ.ಸಂಖ್ಯೆ: 33/2014 ಅಂತ ಕಲಂ 166, 406, 420, 468, 470, 471, 120ಬಿ, ಐಪಿಸಿ ಹಾಗೂ ಪಿ.ಸಿ.ಕಾಯಿದೆ ಕಲಂ 13(1)(ಸಿ) ಸಹ ಕಲಂ 13(2) ರಂತೆ ದಾಖಲಿಸಿಕೊಂಡು ತನಿಖೆ ಕೈಗೊಂಡಿದ್ದಾರೆ. ತನಿಖಾಧಿಕಾರಿಗಳ ತನಿಖೆಯಲ್ಲಿ ಸಾಕ್ಷಿದಾರರ ಹಾಗೂ ಪಂಚರ ಮತ್ತು

ಇತರೆ ದಾಖಲಾತಿಗಳ ಆಧಾರದ ಮೇಲೆ ಪರಿಶೀಲಿಸಿದಾಗ ನಿಮ್ಮ ವಿರುದ್ಧ ಆಪಾಧನೆಗಳು ರುಜುವಾತಾಗಿದ್ದರಿಂದ ದೋಷಾರೋಪಣ ಪಟ್ಟಿ ಸಲ್ಲಿಸಿದ್ದಾರೆ.

ಎದುರುದಾರರು ತಮ್ಮ ಆಕ್ಷೇಪಣೆಯಲ್ಲಿ ದೂರಿನಲ್ಲಿನ ಆಪಾದನೆಗಳನ್ನು ಅಲ್ಲಗಳೆದು ತಾನು ಯಾವುದೇ ದುರ್ನಡತೆ ಎಸಗಿರುವುದಿಲ್ಲವೆಂದು, ದೂರುದಾರರು ವೈಯಕ್ತಿಕ ದ್ವೇಷದಿಂದ ನೀಡಿರುವ ದೂರನ್ನು ಪರಿಗಣಿಸಬಾರದೆಂದು ಕೋರಿ, ಸದರಿ ಪ್ರಕರಣವನ್ನು ಮುಕ್ತಾಯಗೊಳಿಸಬೇಕೆಂದು ಕೇಳಿಕೊಂಡಿದ್ದಾರೆ.

ದೂರುದಾರರು ಹಾಜರುಪಡಿಸಿದ ದುರು ಮತ್ತು ದಾಖಲಾತಿಗಳು, ಆಕ್ಷೇಪಣೆ, ದೋಷಾರೋಪಣಾ ಪಟ್ಟಿಯನ್ನು ಪರಿಶೀಲಿಸಿದಾಗ, ಎದುರುದಾರರ ವಿರುದ್ಧ ಮೇಲ್ನೋಟಕ್ಕೆ ಪ್ರಕರಣ ಕಂಡುಬಂದಿರುತ್ತದೆ. ಈಗಾಗಲೇ ತನಿಖಾಧಿಕಾರಿಗಳು ಈ ಪ್ರಕರಣದ ಬಗ್ಗೆ ಸಂಪೂರ್ಣ ತನಿಖೆ ಮಾಡಿ ದೋಷಾರೋಪಣಾ ಪಟ್ಟಿಯನ್ನು ನ್ಯಾಯಾಲಯಕ್ಕೆ ಅದರ ಒಂದು ಪ್ರತಿಯನ್ನು ಈ ಪ್ರಕರಣದಲ್ಲಿ ಸಲ್ಲಿಸಿರುವುದರಿಂದ, ಎದುರುದಾರರು ಕರ್ತವ್ಯ ದುರುಪಯೋಗ ಪಡಿಸಿಕೊಂಡಿದ್ದಾರೆಂದು ಮೇಲ್ನೋಟಕ್ಕೆ ಕಂಡುಬರುತ್ತದೆ.

ಆದ್ದರಿಂದ ಎದುರುದಾರರು ಸಾರ್ವಜನಿಕ/ಸರ್ಕಾರಿ ನೌಕರರಾಗಿದ್ದು, ತಮ್ಮ ಕರ್ತವ್ಯ ಪರಿಪಾಲನೆಯಲ್ಲಿ ನಿಷ್ಠೆಯನ್ನು ತೋರದೇ, ಕರ್ತವ್ಯಲೋಪವೆಸಗಿ, ದುರ್ವರ್ತನೆ ತೋರಿಸಿ ಸಾರ್ವಜನಿಕ/ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡಿರುವುದು ಮೇಲ್ನೋಟಕ್ಕೆ ಕಂಡುಬಂದಿರುವುದರಿಮದ ಕರ್ನಾಟಕ ನಾಗರೀಕ ಸೇವೆ (ನಡತೆ) ನಿಯಮ, 1966 ರ ನಿಯಮಗಳು 3(1) (i) ಮತ್ತು (ii) ರನ್ವಯ ಶಿಸ್ತು ಕ್ರಮಕ್ಕೆ ಬಾಧ್ಯರಾಗಿರುತ್ತಾರೆಂದು ಕಂಡುಬಂದಿರುವುದರಿಂದ, ಅವರ ವಿರುದ್ಧ ಶಿಸ್ತು ನಡವಳಿಕೆ ಹೂಡಲು ಮತ್ತು ಹಾಗೆಯೇ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿರ್ಬಂಧ ಮತ್ತು ಮೇಲ್ಮನವಿ) ನಿಯಮಗಳು, 1957 ರ ನಿಯಮ 14-ಎ ರ ಅಡಿಯಲ್ಲಿ ಇಲಾಖಾ ವಿಚಾರಣೆ ನಡೆಸಲು ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲು ಶಿಫಾರಸ್ಸು ಮಾಡಿರುತ್ತಾರೆ.

ಶ್ರೀ ಹೆಚ್.ಬಿ.ಲಿಂಗಯ್ಯ, ಅಂದಿನ ಕಾರ್ಯದರ್ಶಿ, ಸಿ.ಎಸ್.ಪುರ ಗ್ರಾಮ ಪಂಚಾಯತಿ, ಪ್ರಸ್ತುತ ಕೊಪ್ಪ ಗ್ರಾಮ ಪಂಚಾಯತಿ, ಕುಣಿಗಲ್ ತಾಲ್ಲೂಕು, ತುಮಕೂರು ಜಿಲ್ಲೆಯಾದ ಇವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿರ್ಬಂಧ ಮತ್ತು ಮೇಲ್ಮನವಿ) ನಿಯಮಗಳು, 1957 ರ ನಿಯಮ 14-ಎ ರ ಅಡಿಯಲ್ಲಿ ಇಲಾಖಾ ವಿಚಾರಣೆ ನಡೆಸಲು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ

**<u>ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ/417/ಗ್ರಾಪಂಕಾ/2017 ಬೆಂಗಳೂರು, ದಿನಾಂಕ: -05-2017.</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಹೆಚ್.ಬಿ.ಲಿಂಗಯ್ಯ, ಅಂದಿನ ಕಾರ್ಯದರ್ಶಿ, ಸಿ.ಎಸ್.ಪುರ ಗ್ರಾಮ ಪಂಚಾಯತಿ, ಪ್ರಸ್ತುತ ಕೊಪ್ಪ ಗ್ರಾಮ ಪಂಚಾಯತಿ, ಕುಣಿಗಲ್ ತಾಲ್ಲೂಕು, ತುಮಕೂರು ಜಿಲ್ಲೆ ಇವರ ವಿರುದ್ಧದ ಆಪಾದನೆಗಳ ಬಗ್ಗೆ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ 14(ಎ) ಅಡಿಯಲ್ಲಿ ಈ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಇವರಿಗೆ ವಹಿಸಲಾಗಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957ರ ನಿಯಮ-8ರ ಅಡಿ ಸೂಚಿತವಾದ ಯಾವುದಾದರೊಂದು ಅಥವಾ ಹೆಚ್ಚಿನ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ವಿ. ಅರುಣ್‌ಕುಮಾರ್)
ಉಪನಿರ್ದೇಶಕರು ಮತ್ತು ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**<u>ಗೆ:</u>**

1) ಮಹಾಲೇಖಪಾಲರು (ಎ ಮತ್ತು ಇ), ಕರ್ನಾಟಕ, ಬೆಂಗಳೂರು.
2) ಮಾನ. ಉಪಲೋಕಾಯುಕರು. ಕರ್ನಾಟಕ ಲೋಕಾಯುಕ. ಬೆಂಗಳೂರು.

3) ಮಾನ್ಯ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು. (ಪುಟ ಸಂಖ್ಯೆ 1 ರಿಂದ 335 ರವರೆಗಿನ ಮೂಲದಾಖಲೆಗಳನ್ನು ಈ ಪತ್ರದೊಂದಿಗೆ ಹಿಂದಿರುಗಿಸಲಾಗಿದೆ)

4) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ತುಮಕೂರು ಜಿಲ್ಲೆ.

5) ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ಕುಣಿಗಲ್ ತಾಲ್ಲೂಕು, ತುಮಕೂರು ಜಿಲ್ಲೆ.

6) ಶ್ರೀ ಹೆಚ್.ಬಿ.ಲಿಂಗಯ್ಯ, ಅಂದಿನ ಕಾರ್ಯದರ್ಶಿ, ಸಿ.ಎಸ್.ಪುರ ಗ್ರಾಮ ಪಂಚಾಯತಿ, ಪ್ರಸ್ತುತ ಕೊಪ್ಪ ಗ್ರಾಮ ಪಂಚಾಯತಿ, ಕುಣಿಗಲ್ ತಾಲ್ಲೂಕು, ತುಮಕೂರು ಜಿಲ್ಲೆ.

7) ಗಣಕ ಕೋಶ-ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.

8) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.